# ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** ಶ್ರೀ ಶಿವಕುಮಾರ್, ಸದಸ್ಯರು, ಕೊಡತಿ ಗ್ರಾಮ ಪಂಚಾಯತಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲಾ ಪಂಚಾಯತಿ ಇವರ ಪತ್ರ ಸಂಖ್ಯೆ: ಆಡಳಿತ(5)ಗ್ರಾಪಂಅ:ಸಿಆರ್/29/2017-18, ದಿನಾಂಕ 03.05.2017
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್, ದಿನಾಂಕ 13.06.2017
3) ಶ್ರೀ ಶಿವಕುಮಾರ್, ಸದಸ್ಯರು, ಕೊಡತಿ ಗ್ರಾಮ ಪಂಚಾಯತಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರ ಲಿಖಿತ ಹೇಳಿಕೆ, ದಿನಾಂಕ 29.06.2017
4) ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ 07.07.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಬೆಂಗಳೂರು ಪೂರ್ವ ತಾಲ್ಲೂಕು ಕೊಡತಿ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರಾದ ಶ್ರೀ ನರಸಿಂಹರಾಜು ಇವರು ಕಾರ್ಯನಿರ್ವಹಿಸುತ್ತಿರುವಾಗ ದಿನಾಂಕ: 24.04.2017 ರಂದು ಕೊಡತಿ ಗ್ರಾಮ ಪಂಚಾಯಿತಿ ಸದಸ್ಯರಾದ ಶ್ರೀ ಶಿವಕುಮಾರ್ ಎಂಬುವವರು ಗ್ರಾಮ ಪಂಚಾಯಿತಿಗೆ ನುಗ್ಗಿ ಏಕಾಏಕಿ ಅವಾಚ್ಯ ಶಬ್ದಗಳಿಂದ ನಿಂದಿಸಿ ಇವರ ಮೇಲೆ ದೈಹಿಕ ಹಲ್ಲೆ ನಡೆಸಿದ್ದು, ಈ ಬಗ್ಗೆ ಆರಕ್ಷಕ ನಿರೀಕ್ಷಕರು, ಪೋಲೀಸ್ ಠಾಣೆ ವರ್ತೂರು ಇಲ್ಲಿ ದೂರು ದಾಖಲಾಗಿರುತ್ತದೆ. ಈ ಬಗ್ಗೆ ತಪ್ಪಿತಸ್ಥರಿಗೆ ಶಿಕ್ಷೆಯಾಗುವಂತೆ ಸೂಕ್ತ ಕ್ರಮ ಜರುಗಿಸಿ ಗ್ರಾಮ ಪಂಚಾಯಿತಿಗಳಲ್ಲಿ ಉತ್ತಮ ರೀತಿಯಲ್ಲಿ ಕರ್ತವ್ಯ ನಿರ್ವಹಿಸಲು ಅನುವು ಮಾಡಿಕೊಡುವಂತೆ ಕರ್ನಾಟಕ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಕೋರಿರುರುವ ಹಿನ್ನೆಲೆಯಲ್ಲಿ, ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಪೂರ್ವ ತಾಲ್ಲೂಕು ರವರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲಾ ಪಂಚಾಯತಿ ಇವರಿಗೆ ವರದಿ ನೀಡಿರುತ್ತಾರೆ. ಈ ಕಾರಣಗಳಿಂದ ಶ್ರೀ ಶಿವಕುಮಾರ್, ಸದಸ್ಯರು, ಕೊಡತಿ ಗ್ರಾಮ ಪಂಚಾಯತಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರ ಸದಸ್ಯತ್ವವನ್ನು ರದ್ದುಗೊಳಿಸುವ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲಾ ಪಂಚಾಯತಿ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43ಎ ರನ್ವಯ ಗ್ರಾಮ ಪಂಚಾಯತಿ ಸದಸ್ಯ ಸ್ಥಾನದಿಂದ ಏಕೆ ವಜಾ ಮಾಡಬಾರದು ಎಂಬುದರ ಬಗ್ಗೆ 15 ದಿನಗಳೊಳಗಾಗಿ ವಿವರಣೆ ನೀಡುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಸದರಿಯವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ (3) ರಲ್ಲಿ ಶ್ರೀ ಶಿವಕುಮಾರ್, ಸದಸ್ಯರು, ಕೊಡತಿ ಗ್ರಾಮ ಪಂಚಾಯತಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರು ಸರ್ಕಾರದಿಂದ ನೀಡಲಾದ ಕಾರಣ ಕೇಳಿ ನೋಟೀಸಿಗೆ ಕೆಳಗಿನಂತೆ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

"ದಿನಾಂಕ:24-04-2017 ರಂದು ಗ್ರಾಮ ಪಂಚಾಯತಿ ಕಾರ್ಯಾಲಯಕ್ಕೆ ಹೋಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಬಳಿ ಬಾಕಿ ಇರುವ ಬಿಲ್ಲುಗಳನ್ನು ಸಂದಾಯ ಮಾಡುವಂತೆ ಕೇಳಿದಾಗ ಬಿಲ್ ಪಾಸ್ ಮಾಡಲು ನಿರಾಕರಿಸಿರುತ್ತಾರೆ. ಕಛೇರಿ ವೆಚ್ಚ ಹಾಗೂ ಇತರೆ ಸಾರ್ವಜನಿಕರ ದೂರುಗಳ ಬಗ್ಗೆ ಮೇಲಧಿಕಾರಿಯವರ ಗಮನಕ್ಕೆ ತರುತ್ತೇನೆ ಎಂದು ಹೇಳಿದಾಗ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ನರಸಿಂಹರಾಜುರವರು ವಿನಾ ಕಾರಣ ಜಗಳ

ತೆಗೆದು ಗಲಾಟೆ ಮಾಡಿರುತ್ತಾರೆ. ತಾನು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಯಾವ ಕಾರ್ಯಕ್ಕೂ ಅಡ್ಡಿಪಡಿಸಿರುವುದಿಲ್ಲ. ಅವರನ್ನು ಅವಾಚ್ಯ ಶಬ್ಧಗಳಿಂದ ನಿಂದಿಸಿರುವುದಿಲ್ಲ ಮತ್ತು ಅವರಿಗೆ ಪ್ರಾಣ ಬೆದರಿಕೆ ಹಾಕಿರುವುದಿಲ್ಲ. ಪಿ.ಡಿ.ಓ. ನರಸಿಂಹರಾಜು ರವರು ನನ್ನ ಮೇಲೆ ಸುಳ್ಳು ದೂರುಗಳನ್ನು ನೀಡಿರುತ್ತಾರೆ ಎಂದು ತಿಳಿಸಿರುತ್ತಾರೆ."

ಮೇಲೆ ಓದಲಾದ (4) ರನ್ವಯ ಶ್ರೀ ಶಿವಕುಮಾರ್, ಸದಸ್ಯರು, ಕೊಡತಿ ಗ್ರಾಮ ಪಂಚಾಯತಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ದಿನಾಂಕ 24.07.2017 ರಂದು ಜರುಗಿದ ವಿಚಾರಣೆಯಲ್ಲಿ ಶ್ರೀ ನರಸಿಂಹರಾಜು, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆಪಾದಿತ ಸದಸ್ಯರು, ಸಹಾಯಕ ನಿರ್ದೇಶಕರು(ಗ್ರಾಉ), ತಾಲ್ಲೂಕು ಪಂಚಾಯತಿ, ಬೆಂಗಳೂರು ಪೂರ್ವ ತಾಲ್ಲೂಕು ಮತ್ತು ಕೊಡತಿ ಗ್ರಾಮ ಪಂಚಾಯತಿಯ ಹಾಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರು ಹಾಜರಿದ್ದರು. ವಿಚಾರಣಾ ಸಂದರ್ಭದಲ್ಲಿ ಎಫ್.ಐ.ಆರ್. ದಾಖಲಿಸಿರುವ ಪ್ರತಿ ಮತ್ತು ವೈದ್ಯಕೀಯ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿರುತ್ತಾರೆ. ಹಾಜರಿದ್ದ ಅಧಿಕಾರಿಗಳು ಹಲ್ಲೆ ನಡೆಸಿರುವುದರ ಬಗ್ಗೆ ಹೇಳಿಕೆ ನೀಡಿರುತ್ತಾರೆ.

ಸರ್ಕಾರವು ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಲಿಖಿತ ಹೇಳಿಕೆಗಳು ಹಾಗೂ ಆಪಾದಿತ ಸದಸ್ಯರ ಹೇಳಿಕೆಗಳನ್ನು ಪರಿಶೀಲಿಸಿ, ಆಪಾದಿತ ಸದಸ್ಯರು ಕರ್ತವ್ಯ ನಿರತ ಸರ್ಕಾರಿ ನೌಕರರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರ ಮೇಲೆ ದೈಹಿಕ ಹಲ್ಲೆ ನಡೆಸಿರುವುದು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರನ್ವಯ ಕ್ರಮವಹಿಸಿ, ಸದರಿಯವರನ್ನು ಕೊಡತಿ ಗ್ರಾಮ ಪಂಚಾಯತಿಯ ಸದಸ್ಯ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 660 ಗ್ರಾಪಂಅ 2017 ಬೆಂಗಳೂರು, ದಿನಾಂಕ: 17.10.2017**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಶಿವಕುಮಾರ್, ಸದಸ್ಯರು, ಕೊಡತಿ ಗ್ರಾಮ ಪಂಚಾಯತಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರು ಕರ್ತವ್ಯ ನಿರತ ಸರ್ಕಾರಿ ನೌಕರರಾದ ಶ್ರೀ ನರಸಿಂಹರಾಜು, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೊಡತಿ ಗ್ರಾಮ ಪಂಚಾಯತಿ ಇವರ ಮೇಲೆ ದೈಹಿಕ ಹಲ್ಲೆನಡೆಸಿರುವ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಶ್ರೀ ಶಿವಕುಮಾರ್, ಸದಸ್ಯರು, ಕೊಡತಿ ಗ್ರಾಮ ಪಂಚಾಯತಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರನ್ನು ಬೆಂಗಳೂರು ನಗರ ಜಿಲ್ಲೆ ಬೆಂಗಳೂರು ಪೂರ್ವ ತಾಲ್ಲೂಕಿನ ಕೊಡತಿ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

17/10/17

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯತಿ, ಬೆಂಗಳೂರು.

2) ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಪೂರ್ವ ತಾಲ್ಲೂಕು ಪಂಚಾಯತಿ, ಬೆಂಗಳೂರು ಪೂರ್ವ ತಾಲ್ಲೂಕು.
4) ಶ್ರೀ ಶಿವಕುಮಾರ್, ಸದಸ್ಯರು, ಕೊಡತಿ ಗ್ರಾಮ ಪಂಚಾಯತಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೊಡತಿ ಗ್ರಾಮ ಪಂಚಾಯತಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
6) ಕಛೇರಿ ಪ್ರತಿ / ಹೆಚ್ಚುವರಿ ಪ್ರತಿ.
7) ಗಣಕ ಕೋಶ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.